ಕರ್ನಾಟಕ ಸರ್ಕಾರ

ಸಂಖ್ಯೆ : ಗ್ರಾಅಪ/16/ಜೈಅಯೋ/2015

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:04-03-2015

## ಅಧಿಕೃತ ಜ್ಞಾಪನ

ವಿಷಯ: ಶ್ರೀ ಬಸವರಾಜಪ್ಪ, ಯೋಜನಾ ಅಭಿಯಂತರರು, ಗ್ರಾಮೀಣ ಇಂಧನ ಕಾರ್ಯಕ್ರಮ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಇವರಿಗೆ ಹೆಚ್ಚುವರಿ ಪ್ರಭಾರ ನೀಡುವ ಬಗ್ಗೆ.

ಉಲ್ಲೇಖ : ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ಶಿಸ್ತು ಪ್ರಾಧಿಕಾರಿ, ಚಿತ್ರದುರ್ಗ ಜಿಲ್ಲಾ ಪಂಚಾಯತ್, ಚಿತ್ರದುರ್ಗ. ಆದೇಶ ನಂ:ಜಿಪಂ:ಆ(3)ಸಿಸಿಎ:ಸಿಆರ್-151/2014-15, ದಿನಾಂಕ:16-02-2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಶೇಕ್ ಅಹಮದ್, ಯೋಜನಾ ಅಭಿಯಂತರರು, ಗ್ರಾಮೀಣ ಇಂಧನ ಕಾರ್ಯಕ್ರಮ, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಇವರನ್ನು ಕರ್ತವ್ಯಲೋಪದ ಕಾರಣ ಇಲಾಖಾ ವಿಚಾರಣೆ ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ಶಿಸ್ತು ಪ್ರಾಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರು ಉಲ್ಲೇಖದಲ್ಲಿ ಆದೇಶಿಸಿರುವುದರಿಂದ, ಶ್ರೀ.ಬಸವರಾಜಪ್ಪ, ಯೋಜನಾ ಅಭಿಯಂತರರು, ಗ್ರಾಮೀಣ ಇಂಧನ ಕಾರ್ಯಕ್ರಮ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರನ್ನು ಪ್ರಸ್ತುತ ಹುದ್ದೆಯ ಜೊತೆಗೆ ಶೇಕ್ ಅಹಮದ್, ಇವರ ಜಾಗಕ್ಕೆ ಹೆಚ್ಚುವರಿ ಪ್ರಭಾರದಲ್ಲಿರಿಸಿ ತಕ್ಷಣದಿಂದಲೇ ಜಾರಿಗೆ ಬರುವಂತೆ ನಿಯೋಜಿಸಲಾಗಿದೆ.

4/3/15

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು :

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ದಾವಣಗೆರೆ ಇವರಿಗೆ ಮುಂದಿನ ಕ್ರಮಕ್ಕಾಗಿ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಇವರಿಗೆ ಮುಂದಿನ ಕ್ರಮಕ್ಕಾಗಿ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಮಾಹಿತಿಗಾಗಿ.
4. ಶ್ರೀ.ಬಸವರಾಜಪ್ಪ, ಯೋಜನಾ ಅಭಿಯಂತರರು, ಗ್ರಾಮೀಣ ಇಂಧನ ಕಾರ್ಯಕ್ರಮ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ಹೆಚ್ಚುವರಿ ಕಡತಕ್ಕೆ.